# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 412
ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.
(ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 13.08.2025
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕು ಲಾಯಿಲ ಗ್ರಾಮ ಸರ್ವೆ ನಂಬರ್: 131/3 ರಲ್ಲಿ 0.20 ಎಕರೆ (ಇಪ್ಪತ್ತು ಸೆಂಟ್) ಸರ್ಕಾರಿ ಜಮೀನನ್ನು ಲಾಯಿಲ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಪ್ರಸ್ತುತ ಯಾವ ಹಂತದಲ್ಲಿದೆ; | ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕು ಲಾಯಿಲ ಗ್ರಾಮ ಸರ್ವೆ ನಂಬರ್: 131/3 ರಲ್ಲಿ 0.20 ಎಕರೆ (ಇಪ್ಪತ್ತು ಸೆಂಟ್) ಸರ್ಕಾರಿ ಜಮೀನನ್ನು ಲಾಯಿಲ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಮಂಜೂರು ಮಾಡುವಂತೆ ಕೋರಿ ಈ ಹಿಂದೆ ಸ್ವೀಕೃತವಾಗಿದ್ದ ಪ್ರಸ್ತಾವನೆಯು ಗೋಮಾಳ ಜಮೀನೆಂಬ ಕಾರಣದಿಂದ ಸರ್ಕಾರದ ಪತ್ರ ಸಂಖ್ಯೆ ಕಂಇ 34 ಎಲ್‌ಜಿಎ 2022, ದಿನಾಂಕ 05.10.2023 ರನ್ವಯ ಪ್ರಸ್ತಾವನೆಯನ್ನು ತಿರಸ್ಕರಿಸಲಾಗಿತ್ತು. |
| (ಆ) | ಸಾರ್ವಜನಿಕ ಹಿತಾಸಕ್ತಿಯ ಹಿನ್ನಲೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು, ಲಾಯಿಲ ಗ್ರಾಮದ ಸರ್ವೆ ನಂಬರ್: 131/1 ರಲ್ಲಿ 0.20 ಎಕರೆ (ಇಪ್ಪತ್ತು ಸೆಂಟ್) ಸರ್ಕಾರಿ ಜಮೀನನ್ನು ಲಾಯಿಲ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಮಂಜೂರು ಮಾಡಲು ಸರ್ಕಾರ ಈ ಕೂಡಲೇ ಅಗತ್ಯ ಕ್ರಮವಹಿಸುವುದೇ; | ಲಾಯಿಲ ಹಾಲು ಉತ್ಪಾದಕರ ಸಹಕಾರ ಸಂಘದಿಂದ ಮತ್ತೊಮ್ಮೆ ದಿನಾಂಕ:31.01.2025 ರಂದು ನೀಡಲಾದ ಮನವಿಯ ಹಿನ್ನೆಲೆಯಲ್ಲಿ ಪರಿಶೀಲಿಸಿ, ಸರ್ಕಾರದ ಪತ್ರ ಸಂಖ್ಯೆ ಕಂಇ 6 ಎಲ್‌ಜಿಎ 2025 ದಿ:18.03.2025 ರನ್ವಯ ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲೂಕು ಲಾಯಿಲ ಗ್ರಾಮದ ಸ.ನಂ.131/1 ರಲ್ಲಿ 0.20 ಎಕರೆ ಸರ್ಕಾರಿ ಜಮೀನನ್ನು ಲಾಯಿಲ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಮಂಜೂರು ಮಾಡುವ ಪ್ರಸ್ತಾವನೆಯನ್ನು ನಿಯಮಾನುಸಾರ ಪರಿಶೀಲಿಸಿ ಅಗತ್ಯವಿದ್ದಲ್ಲಿ ಅಭಿಪ್ರಾಯ ಮತ್ತು ಶಿಫಾರಸ್ಸಿನೊಂದಿಗೆ ಸಮುಚಿತ ಮಾರ್ಗದ ಮೂಲಕ ಇತ್ತೀಚಿನ ವಿವರಗಳೊಂದಿಗೆ ಪ್ರಸ್ತಾವನೆ ಸಲ್ಲಿಸಲು ಜಿಲ್ಲಾಧಿಕಾರಿಯವರಿಗೆ ಸೂಚಿಸಲಾಗಿದ್ದು, ಪ್ರಸ್ತಾವನೆಯು ನಿರೀಕ್ಷಣೆಯಲ್ಲಿದೆ. |
| (ಇ) | ಯಾವ ಕಾಲಮಿತಿಯೊಳಗೆ ಸದರಿ ಜಮೀನನ್ನು ಲಾಯಿಲ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಮಂಜೂರು ಮಾಡಲಾಗುವುದು? | |

(ಕಡತ ಸಂಖ್ಯೆ: ಆರ್‌ಡಿ 82 ಎಲ್‌ಜಿಎ 2025)

**(ಕೃಷ್ಣ ಬೈರೇಗೌಡ)**
**ಕಂದಾಯ ಸಚಿವರು**